## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು 2012-13 ನೇ ಸಾಲಿಗೆ ಡಿಆರ್‌ಡಿಎ ಆಡಳಿತ ಯೋಜನೆಯಡಿ ರಾಜ್ಯದ 5 ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡಿದ ಒಂದನೇ ಕಂತಿನ ಅನುದಾನಕ್ಕನುಗುಣವಾಗಿ ರಾಜ್ಯದ ಪಾಲಿನ ಅನುದಾನ ವನ್ನುಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: (1) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : ಆರ್-17014/01/ : 2012-13 ಡಿಆರ್‌ಡಿಎ (ಎಸ್‌ಎಲ್ ನಂ.10) ದಿನಾಂಕ 21-05-2012.

(2) ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 2 ಎಸ್‌ಜಿವೈ (ಡಿಆರ್‌ಡಿಎ) 2011, ಬೆಂಗಳೂರು, ದಿನಾಂಕ :07-06-2012 ಮತ್ತು 17-09-2012.

(3) ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 4 ಎಸ್‌ಜಿವೈ (ಡಿಆರ್‌ಡಿಎ) 2012, ಬೆಂಗಳೂರು, ದಿನಾಂಕ : 17-09-2012.

(4) ಕೇಂದ್ರ ಸರ್ಕಾರದ ಪತ್ರ ಸಂಖ್ಯೆ : ಆರ್-17014/11/ : 2012-13 ಡಿಆರ್‌ಡಿಎ (ಎಸ್‌ಎಲ್ ನಂ.41) ದಿನಾಂಕ 24-08-2012.

**ಪ್ರಸ್ತಾವನೆ:**

ಡಿಆರ್‌ಡಿಎ ಆಡಳಿತ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು 75:25ರ ಅನುಪಾತದಲ್ಲಿ ಭರಿಸುತ್ತವೆ. 2012-13 ನೇ ಸಾಲಿಗೆ ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ರಾಜ್ಯದ 16 ಜಿಲ್ಲಾ ಪಂಚಾಯತಿಗಳಿಗೆ ಡಿಆರ್‌ಡಿಎ ಆಡಳಿತ ಯೋಜನೆಯಡಿ ಓದಲಾಗಿರುವ (1) ರ ಪತ್ರದಲ್ಲಿ ಒಂದನೇ ಕಂತಿನ ಅನುದಾನ ₹5,62,57,000 ಬಿಡುಗಡೆ ಮಾಡಿದೆ. ಇದಕ್ಕನುಗುಣವಾಗಿ ರಾಜ್ಯ ಸರ್ಕಾರವು ತನ್ನ ಪಾಲಿನ ಒಂದನೇ ಕಂತಿನ ಅನುದಾನ ₹1,87,52,000 ಗಳನ್ನು ಬಿಡುಗಡೆ ಮಾಡಬೇಕಾಗಿತ್ತು. ಆದರೆ, 2012-13 ನೇ ಸಾಲಿನ ರಾಜ್ಯದ ಆಯವ್ಯಯದಲ್ಲಿ ಹಾಸನ ಮತ್ತು ಶಿವಮೊಗ್ಗ ಜಿಲ್ಲಾ ಪಂಚಾಯತಿಗಳಿಗೆ ಒದಗಿಸಿದ ಅನುದಾನದ ಲಭ್ಯತೆಗೆ ಅನುಸಾರ ಹಾಗೂ ಉಳಿದ 14 ಜಿಲ್ಲಾ ಪಂಚಾಯತಿಗಳಿಗೆ ಕೇಂದ್ರ ಬಿಡುಗಡೆ ಮಾಡಿದ ಅನುದಾನಕ್ಕನುಗುಣವಾಗಿ ರಾಜ್ಯದ ಪಾಲಿನ ಒಂದನೇ ಕಂತಿನ ಅನುದಾನ ₹1,75,26,000 ಗಳನ್ನು ಓದಲಾಗಿದೆ (3) ರ ಆದೇಶದಲ್ಲಿ ಬಿಡುಗಡೆ ಮಾಡಿದೆ

ಓದಲಾಗಿದೆ (4) ರ ಆದೇಶದಲ್ಲಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು 2012-13 ನೇ ಸಾಲಿಗೆ ಒಂದನೇ ಕಂತಿನ ಅನುದಾನವಾಗಿ ಬೆಂಗಳೂರು ನಗರ, ಬೆಳಗಾವಿ, ಬಳ್ಳಾರಿ, ಹಾವೇರಿ ಮತ್ತು ಮಂಡ್ಯ ಜಿಲ್ಲಾ ಪಂಚಾಯತಿಗಳಿಗೆ ₹1,87,08,000 ಗಳನ್ನು ಬಿಡುಗಡೆ ಮಾಡಿದೆ. ಇದಕ್ಕನುಗುಣವಾಗಿ ರಾಜ್ಯದ ಪಾಲಿನ ಒಂದನೇ ಕಂತಿನ ಅನುದಾನವಾಗಿ ಸದರಿ 5 ಜಿಲ್ಲಾ ಪಂಚಾಯತಿಗಳಿಗೆ ₹62,35,000 ಗಳನ್ನು ಬಿಡುಗಡೆ ಮಾಡಬೇಕಾಗಿದೆ. ಆದುದರಿಂದ ಈ ಆದೇಶ :

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 4 ಎಸ್‌ಜಿವೈ (ಡಿಆರ್‌ಡಿಎ) 2012, ಬೆಂಗಳೂರು,**
**ದಿನಾಂಕ: 11-10-2012.**

**ರಾಜ್ಯ ಸರ್ಕಾರವು, ಡಿಆರ್‌ಡಿಎ ಆಡಳಿತ ಯೋಜನೆಯಡಿ 2012-13 ನೇ ಸಾಲಿನಲ್ಲಿ ಒಂದನೇ ಕಂತಿನ ಅನುದಾನವಾಗಿ ಬೆಂಗಳೂರು ನಗರ, ಬೆಳಗಾವಿ, ಬಳ್ಳಾರಿ, ಹಾವೇರಿ ಮತ್ತು ಮಂಡ್ಯ ಜಿಲ್ಲಾ ಪಂಚಾಯತಿಗಳಿಗೆ ಒಟ್ಟು ₹62,35,000 ಗಳನ್ನು (₹ ಅರವತ್ತೆರಡು ಲಕ್ಷದ ಮೂವತ್ತೈದು ಸಾವಿರ ಮಾತ್ರ) ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಲು ಮಂಜೂರಾತಿ ನೀಡಿದೆ.**

| ಕ್ರ ಸಂ | ಜಿಲ್ಲಾ ಪಂಚಾಯತಿಯ ಹೆಸರು | ಜಿಲ್ಲಾ ಕೋಡ್ | ಡಿ.ಡಿ.ಓ ಕೋಡ್ | 2012-13 ನೇ ಸಾಲಿನಲ್ಲಿ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಒಂದನೇ ಕಂತಿನ ಅನುದಾನ | ಇದಕ್ಕನುಗುಣವಾಗಿ ರಾಜ್ಯ ಸರ್ಕಾರವು ಬಿಡುಗಡೆ ಮಾಡುತ್ತಿರುವ ಒಂದನೇ ಕಂತಿನ ಅನುದಾನ |
|---|---|---|---|---|---|
| 1 | 2 | 3 | 4 | 5 | 6 |
| 1 | ಬೆಂಗಳೂರು ನಗರ | 401 | 0100ZZ8001 | 31,40,000 | 10,47,000 |
| 2 | ಬೆಳಗಾಂ | 413 | 2200ZZ0002 | 38,92,000 | 12,97,000 |
| 3 | ಬಳ್ಳಾರಿ | 418 | 3400ZZ0001 | 38,92,000 | 12,97,000 |
| 4 | ಹಾವೇರಿ | 463 | 2700ZZ0001 | 38,92,000 | 12,97,000 |
| 5 | ಮಂಡ್ಯ | 412 | 1100ZZ0001 | 38,92,000 | 12,97,000 |
| | | | ಒಟ್ಟು : | 1,87,08,000 | 62,35,000 |

ಷರತ್ತುಗಳು : ಡಿಆರ್‌ಡಿಏ ಆಡಳಿತ ಯೋಜನೆಯ ಕೈಪಿಡಿಯ ಮಾರ್ಗಸೂಚಿಯಂತೆ ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನವನ್ನು ಜಿಲ್ಲಾ ಪಂಚಾಯತ್ ಸಿಬ್ಬಂದಿಗಳ ವೇತನ ಹಾಗೂ ಸಾದಿಲ್ವಾರು ವೆಚ್ಚಗಳಿಗೆ ಮಾತ್ರ ಉಪಯೋಗಿಸಲು ಅವಕಾಶವಿದೆ. ಕೇಂದ್ರ ಹಾಗೂ ರಾಜ್ಯದ ಪಾಲಿನ ಅನುದಾನವು ಸೇರಿ ವೆಚ್ಚವನ್ನು ಭರಿಸಬೇಕಾಗಿರುವುದರಿಂದ ರಾಜ್ಯದ ಪಾಲಿನ ಅನುದಾನವನ್ನು ವೇತನ ಮತ್ತು ವೇತನೇತರವೆಂದು ವಿಂಗಡಿಸದೆ ಒಟ್ಟಾರೆ ರಾಜ್ಯದ ಪಾಲಿನ ಅನುದಾನವನ್ನು ಖಜಾನೆಯಿಂದ ಡ್ರಾ ಮಾಡಲು ಖಜನಾಧಿಕಾರಿಗಳು ಅನುಮತಿ ನೀಡತಕ್ಕದ್ದು.

ಯೋಜನೆಯ ವೆಚ್ಚವನ್ನು ಲೆಕ್ಕ ಶೀರ್ಷಿಕೆ : " 2515 ಇತರೆ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳು 00-196-ಜಿಲ್ಲಾ ಪಂಚಾಯತ್‌ಗಳಿಗೆ ಸಹಾಯ-6-ಜಿಲ್ಲಾ ಪಂಚಾಯತ್-06-ಡಿಆರ್‌ಡಿಏ ಆಡಳಿತಾತ್ಮಕ ವೆಚ್ಚ- (ಕೇಂದ್ರ ಪುರಸ್ಕೃತ ಯೋಜನೆ) 2012-2013 ಲಿಂಕ್ ಕೋಡ್ 2515-00-196-6-06 " (ಹೊಸ ಜಿಲ್ಲಾ ಪಂಚಾಯತ್ ಕೋಡ್ 2515-00-101-0-01) ರಡಿ ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ ಎಫ್‌ಡಿ 1 ಜಡ್‌ಪಿಎ 2007 (ಪಿ2) ದಿನಾಂಕ 26-04-2007 ರನ್ವಯ ಜಿಲ್ಲಾ ಪಂಚಾಯತ್ ನಿಧಿ-1ಕ್ಕೆ ಜಮೆ ಮಾಡಿಕೊಂಡು ಆರ್ಥಿಕ ಇಲಾಖೆ (ವೆಚ್ಚ-6) ಯ ಸಂಖ್ಯೆ ಆಇ 172 ವೆಚ್ಚ-6/2011 ದಿನಾಂಕ 30-03-2011 ರ ಸಹಮತಿಯಂತೆ ಪೇಯಿಸ್ ರಸೀದಿಯ ಮೂಲಕ ಜಿಲ್ಲಾ ಪಂಚಾಯತಿ ನಿಧಿಯಿಂದ ಅನುದಾನವನ್ನು ಖಜಾನೆಯಿಂದ ಪಡೆದುಕೊಂಡು ಕಾರ್ಯಕ್ರಮದ ಅನುಷ್ಠಾನಕ್ಕಾಗಿ ತೆರೆದಿರುವ ಬ್ಯಾಂಕ್ ಖಾತೆಗೆ ಜಮೆ ಮಾಡಿಕೊಂಡು ವೆಚ್ಚವನ್ನು ಭರಿಸತಕ್ಕದ್ದು.

ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳಿಗೆ ಅನುದಾನವನ್ನು ಖಜಾನೆಯಿಂದ ಸೆಳೆಯಲು ಕಾನೂನು ರೀತ್ಯ ಅಧಿಕಾರ ನೀಡಲಾಗಿದೆ.

ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನದ ಆಂತರಿಕ ಲೆಕ್ಕ ಪರಿಶೋಧನೆಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮಾಡುವುದು.

ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು, ಆಯಾ ತಿಂಗಳ ಪ್ರಗತಿ ವರದಿ ಹಾಗೂ ಹುದ್ದೆವಾರು ವಿವರಗಳನ್ನು ಮುಂದಿನ ತಿಂಗಳ 5 ನೇ ತಾರೀಖಿನೊಳಗೆ ನಿರ್ದೇಶಕರು {ಸ್ವಉಕಾ} ಹಾಗೂ ಪ.ನಿ.ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ತಪ್ಪದೇ ಕಳುಹಿಸುವುದು.

ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳು ಹಣ ಉಪಯೋಗ ಪ್ರಮಾಣ ಪತ್ರ ಹಾಗೂ ಲೆಕ್ಕ ಪರಿಶೋಧನಾ ವರದಿಗಳನ್ನು, ನಿರ್ದೇಶಕರು {ಸ್ವಉಕಾ} ಹಾಗೂ ಪದ ನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಕರ್ನಾಟಕ ಸರ್ಕಾರ, ಬೆಂಗಳೂರು ಇವರಿಗೆ ತಪ್ಪದೇ ಕಳುಹಿಸುವುದು.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ ಇವರ ಸಹಮತಿ ಸಂಖ್ಯೆ:ಗ್ರಾಅಪ 113 ಪಿಬಿಎಸ್ 2012 ದಿನಾಂಕ: 05-10-2012 ರಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಂ. ದೀಪ)
ನಿರ್ದೇಶಕರು (ಸ್ವಉಕಾ)
ಹಾಗೂ ಪ.ನಿ. ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು ಕೋರಲಾಗಿದೆ. (ಎರಡು ಪ್ರತಿಗಳು)

**ಪ್ರತಿ:**

1. ಪ್ರಧಾನ ಮಹಾಲೇಖಪಾಲರು, ಭಾರತೀಯ ಪರಿಶೋಧನೆ ಮತ್ತು ಲೆಕ್ಕ ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು (ಡಿಆರ್‌ಡಿಎ), ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಭಾರತ ಸರ್ಕಾರ, ಕೃಷಿಭವನ, ನವದೆಹಲಿ.
3. ಶಾಖಾಧಿಕಾರಿ (ಡಿಆರ್‌ಡಿಎ), ಗ್ರಾಮೀಣಾಭಿವೃದ್ಧಿ ಮಂತ್ರಾಲಯ, ಭಾರತ ಸರ್ಕಾರ, ಕೃಷಿಭವನ,ನವದೆಹಲಿ.
4. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಅಧ್ಯಕ್ಷರಿಗೆ ಮಾಹಿತಿಗಾಗಿ
5. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮಾಹಿತಿಗಾಗಿ.
6. ಸಂಬಂಧಿಸಿದ ಜಿಲ್ಲಾ ಪಂಚಾಯತಿಗಳ ಮುಖ್ಯ ಲೆಕ್ಕಾಧಿಕಾರಿಗಳಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
7. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ವಿವಿ ಟವರ್, ಬೆಂಗಳೂರು - 560 001.
8. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, 2ನೇ ಮಹಡಿ, ಖನಿಜ ಭವನ (ಸರ್ಕಾರಿ ಬ್ಲಾಕ್) ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
9. ಸಂಬಂಧಿಸಿದ ಜಿಲ್ಲಾ ಖಜಾನಾಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ
10. ಮಾನ್ಯ ಗ್ರಾಅ ಮತ್ತು ಪಂರಾ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು - 560 001.
12. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬ.ಮ. ಕಟ್ಟಡ.
13. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಅ ಮತ್ತು ಪಂರಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ.
14. ಸರ್ಕಾರದ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಅ ಪಂರಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ.
15. ಸರ್ಕಾರದ ಕಾರ್ಯದರ್ಶಿಗಳು, (ವೆಚ್ಚ), ಆರ್ಥಿಕ ಇಲಾಖೆ, ವಿಧಾನಸೌಧ ರವರ ಆಪ್ತ ಕಾರ್ಯದರ್ಶಿಗಳಿಗೆ
16. ಆಂತರಿಕ ಆರ್ಥಿಕ ಸಲಹೆಗಾರರು/ನಿರ್ದೇಶಕರು (ಪಿಎಂಐ), ಗ್ರಾಅಪಂರಾ ಇಲಾಖೆ
17. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಅಪಂರಾ ಇಲಾಖೆ.
18. ಶಾಖಾಧಿಕಾರಿ, ಪತ್ರಸ್ವೀಕಾರ ಮತ್ತು ರವಾನೆ ಶಾಖೆ, ಗ್ರಾ ಅ ಪಂರಾ ಇಲಾಖೆ
19. ~~ರಕ್ಷಕ ಕಡತ~~ / ಹೆಚ್ಚಿನ ಪ್ರತಿ.

***